# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **908 (852)** |
| ಸದಸ್ಯರ ಹೆಸರು | : | **ಶ್ರೀ ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು)** |
| ಉತ್ತರಿಸುವ ದಿನಾಂಕ | : | **17/12/2024** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ನಗರಸಭೆಯಲ್ಲಿ ಚುನಾಯಿತ ಪ್ರತಿನಿಧಿಗಳಿದ್ದಾಗ್ಯೂ ಸಹ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆ ಖಾಲಿ ಇರುವುದನ್ನು ಆಧಾರವಾಗಿಟ್ಟುಕೊಂಡು ಜಿಲ್ಲಾಧಿಕಾರಿಗಳು ನಗರ ಸಭೆಯ ಚುನಾಯಿತ ಪ್ರತಿನಿಧಿಗಳ ಗಮನಕ್ಕೆ ತಾರದೆ ಅಧಿಕಾರಿಗಳ ಸಭೆ ನಡೆಸಿ ಸುಮಾರು 10 ಕೋಟಿ ರೂಗಳಿಗೂ ಹೆಚ್ಚು ಅನುದಾನ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿವಿಧ ಯೋಜನೆಗಳ ಕ್ರಿಯಾ ಯೋಜನೆಯನ್ನು ಅನುಮೋದಿಸಲು ದಿನಾಂಕ:10.07.2024 ರಂದು ಚಿಕ್ಕಮಗಳೂರು ನಗರಸಭೆಯು ಕೌನ್ಸಿಲ್ ಸಭೆಯನ್ನು ಕರೆಯಲಾಗಿತ್ತು, ಅಂದಿನ ಸಭೆಯಲ್ಲಿ ಬಹುಮತದ ಕೊರತೆ ಕಾರಣ ಸಭೆಯು ನಡೆಯದೇ ಬರ್ಖಾಸ್ತುಗೊಳಿಸಲ್ಪಟ್ಟಿದೆ. ಹೀಗೆ ಅಂದು ಕರೆಯಲಾದ ಸಭೆಯಲ್ಲಿ 2024-25ನೇ ಸಾಲಿನ 15ನೇ ಹಣಕಾಸು ಯೋಜನೆ ಮತ್ತು ಎಸ್.ಎಫ್.ಸಿ ಯೋಜನೆಯ ಕ್ರಿಯಾ ಯೋಜನೆಯನ್ನು ಅನುಮೋದಿಸುವ ವಿಷಯವನ್ನು ಪ್ರಸ್ತಾಪಿಸಲಾಗಿತ್ತು. ಹೀಗಾಗಿ ಸದರಿ ವಿಷಯದ ಕುರಿತು ಕೌನ್ಸಿಲ್ ಗೆ ಮಾಹಿತಿ ಇರುತ್ತದೆ.<br><br>2024-25ನೇ ಸಾಲಿನ 15ನೇ ಹಣಕಾಸು ಯೋಜನೆ ಮತ್ತು ಎಸ್.ಎಫ್.ಸಿ ಯೋಜನೆಯ ಕ್ರಿಯಾ ಯೋಜನೆಯನ್ನು ಸರ್ಕಾರದ ನಿರ್ದೇಶನದಂತೆ ಕಾಲಮಿತಿಯೊಳಗೆ ಮಂಜೂರಾತಿ ಪಡೆಯಲು ನಗರ ಸ್ಥಳೀಯ ಸಂಸ್ಥೆಗಳಿಗೆ ಹಾಗೂ ಮಂಜೂರಾತಿ ನೀಡಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ಇದ್ದು, ಈ ಕಾರಣ ನಗರ ಸಭೆಯ ಆಡಳಿತಾಧಿಕಾರಿಯಾಗಿ ಸರ್ಕಾರದ ಸುತ್ತೋಲೆ ಹಾಗೂ ನಿಯಮಗಳಂತೆ ತೀರ್ಮಾನ ಕೈಗೊಂಡು 15ನೇ ಹಣಕಾಸು ಯೋಜನೆಯಡಿ ಮಂಜೂದಾದ ರೂ.647.00 ಲಕ್ಷ ಮತ್ತು ಎಸ್.ಎಫ್.ಸಿ ಯಡಿ ರೂ.233.00 ಲಕ್ಷಗಳ ಕ್ರಿಯಾಯೋಜನೆಗೆ ಈ ಹಿಂದೆ ಕೌನ್ಸಿಲ್ ಸಭೆಯಲ್ಲಿ ಪ್ರಸ್ಥಾಪಿಸಲಾಗಿದ್ದಂತೆ ದಿನಾಂಕ:12.08.2024 ರಂದು ಆಡಳಿತಾಧಿಕಾರಿಯ ಸಭೆಯಲ್ಲಿ ಠರಾವು ಅಂಗೀಕರಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಈ ರೀತಿ ಚುನಾಯಿತ ಪ್ರತಿನಿಧಿಗಳಿದ್ದಾಗ್ಯೂ ಅವರನ್ನು ಹೊರಗಿಟ್ಟು ಸಭೆ ನಡೆಸಿ ಕೋಟ್ಯಾಂತರ ರೂಪಾಯಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಅಧಿಕಾರ ಇದೆಯೆ; | ಚಿಕ್ಕಮಗಳೂರು ನಗರ ಸಭೆಯ ಅಧ್ಯಕ್ಷರ ಪದಾವಧಿಯು ಮುಕ್ತಾಯಗೊಂಡ ಕಾರಣ ಸರ್ಕಾರದ ಆದೇಶ ಸಂಖ್ಯೆ: ನಅಇ 48 ಎಂಎಲ್ಆರ್ 2023, ದಿನಾಂಕ:29/07/2024ರಂತೆ ಜಿಲ್ಲಾಧಿಕಾರಿಗಳನ್ನು ದಿನಾಂಕ:21.07.2024 ರಿಂದ ಜಾರಿಗೆ ಬರುವಂತೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಾಲಂ 315ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದಂತೆ ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ ಮತ್ತು ಅದರಂತೆ ಜಿಲ್ಲಾಧಿಕಾರಿಯವರು ತಮ್ಮ ಕರ್ತವ್ಯ ನಿರ್ವಹಿಸಿರುತ್ತಾರೆ. |

| | | |
|---|---|---|
| ಇ) | ಇದ್ದಲ್ಲಿ, ಯಾವ ಕಾಯ್ದೆಯ ಯಾವ ನಿಯಮದ ಪ್ರಕಾರ ಅಧಿಕಾರವನ್ನು ನೀಡಲಾಗಿದೆ; ಅಧಿಕಾರ ಇಲ್ಲದಿದ್ದಲ್ಲಿ ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದೆ? (ವಿವರ ಒದಗಿಸುವುದು) | ಸರ್ಕಾರವು ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 315ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದಂತೆ ಜಿಲ್ಲಾಧಿಕಾರಿಗಳನ್ನು ಆಡಳಿತಾಧಿಕಾರಿಯನ್ನಾಗಿ ನೇಮಕಮಾಡಲಾಗಿದೆ. ಆಡಳಿತಾಧಿಕಾರಿಯಾಗಿ ತೀರ್ಮಾನ ಕೈಗೊಂಡು, ಜಿಲ್ಲಾಧಿಕಾರಿಯಾಗಿ ಆಯಾ ಯೋಜನೆಯ ಮಾರ್ಗಸೂಚಿಯಂತೆ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲಾಗಿರುತ್ತದೆ. |

**ಸಂಖ್ಯೆ: ನಅಇ 72 ಎಲ್‌ಸಿಕ್ಯೂ 2024.**

(ರಹೀಂ ಖಾನ್)
**ಪೌರಾಡಳಿತ ಹಾಗೂ ಹಜ್ ಸಚಿವರು**